ಕಾರ್ಯಪಾಲಕ ಅಭಿಯಂತರರ ಕಛೇರಿ
ಲೋ.ಇ. ಬೆಂಗಳೂರು ವಿಭಾಗ,
ಲೋ.ಇ ಆನೆಕ್ಸ್ ಕಟ್ಟಡ 2ನೇ ಮಹಡಿ
ಕೆ.ಆರ್.ವೃತ್ತ ಬೆಂಗಳೂರು 01

ದೂರವಾಣಿ : 080-22133370
ಫ್ಯಾಕ್ಸ್: 080-22133365
ಇ ಮೇಲ್:eepwdbngdn@yahoo.com

ಕರ್ನಾಟಕ ಸರ್ಕಾರ
(ಲೋಕೋಪಯೋಗಿ ಇಲಾಖೆ)

Original Building Safety Certificate

ಸಂಖ್ಯೆ:ಕಾಇಅಂ:ಬೆಂವಿ:ವಿಇ-1:2022-23 | 450

ದಿ: 30/4/22

"ಗುಣಾತ್ಮಕ ಅಂಶ ಮತ್ತು ಸ್ವಚ್ಛತೆ"

ರವರಿಗೆ,-

**Principal,**
**ASSISI School,**
Avalahalli Grama Panchayathi,
Bidarahalli Hobli, T.C. Palya,
K.R. Puram, Bangalore – 560036.

ಮಾನ್ಯರೇ,

ವಿಷಯ: ಬೆಂಗಳೂರು ಪೂರ್ವ ತಾಲ್ಲೂಕು, ಆವಲಹಳ್ಳಿ ಪಂಚಾಯಿತಿ, ಬಿದರಹಳ್ಳಿ ಹೋಬಳಿ, ಕಿತ್ತಗನೂರು ಗ್ರಾಮದಲ್ಲಿರುವ **ASSISI School** ಕಟ್ಟಡಕ್ಕೆ ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

ಉಲ್ಲೇಖ:
1. ದಿನಾಂಕ: 19.09.2020 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಲೋಇ 59 ಬಿಇಡಿ 2019, ದಿನಾಂಕ: 10-11-2021
3. ಸರ್ಕಾರದ ತಿದ್ದುಪಡಿ ಪತ್ರ ಸಂಖ್ಯೆ: ಲೋಇ 59 ಬಿಇಡಿ 2019, ದಿನಾಂಕ: 20-11-2021
4. ತಮ್ಮ ಕಛೇರಿಯ ಪತ್ರ ದಿನಾಂಕ: 30.03.2022
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.1 ದಕ್ಷಿಣ ಉಪವಿಭಾಗ, ಬೆಂಗಳೂರು ರವರ ಪತ್ರ ಸಂಖ್ಯೆ: 2022-23/52 ದಿನಾಂಕ: 27.04.2022

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಬೆಂಗಳೂರು ಪೂರ್ವ ತಾಲ್ಲೂಕು, ಆವಲಹಳ್ಳಿ ಪಂಚಾಯಿತಿ, ಬಿದರಹಳ್ಳಿ ಹೋಬಳಿ, ಕಿತ್ತಗನೂರು ಗ್ರಾಮದಲ್ಲಿರುವ **ASSISI School** ಕಟ್ಟಡದ ಸುರಕ್ಷತಾ ಪ್ರಮಾಣ ಪತ್ರವನ್ನು ಶಿಕ್ಷಣ ಇಲಾಖೆಗೆ ಒದಗಿಸಲು ಅಗತ್ಯವಿರುವುದಾಗಿ ತಿಳಿಸಿ ಕಟ್ಟಡದ ಸುರಕ್ಷತಾ ಪ್ರಮಾಣ ಪತ್ರ ನೀಡಲು ಉಲ್ಲೇಖ (4) ರ ಪತ್ರದಲ್ಲಿ ಕೋರಿರುತ್ತೀರಿ.

ರಿಟ್ ಪಿಟೀಷನ್ (ಸಿವಿಲ್) ಸಂ: 484 (2004) ಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ನೀಡಲಾದ ಜಡ್ಜ್‌ಮೆಂಟ್‌ನಲ್ಲಿ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ ರವರು ಶಾಲಾ/ಕಾಲೇಜು ಕಟ್ಟಡಗಳನ್ನು ಪರಿಶೀಲಿಸಿ **"Structurally Stable Certificate"** ಅನ್ನು ನೀಡಲು ಆದೇಶಿಸಿರುವುದರಿಂದ ಹಾಗೂ ಉಲ್ಲೇಖ (1) ರ ಸಭಾ ನಡವಳಿಯ ನಿರ್ದೇಶನದಂತೆ ಈಗಾಗಲೇ ನಿರ್ಮಾಣಗೊಂಡು ಅಸ್ತಿತ್ವದಲ್ಲಿರುವಂತಹ ಕಟ್ಟಡಗಳಿಗೆ ರಚನಾತ್ಮಕ (Structural Evaluation) ಮೌಲ್ಯಮಾಪನ ಮಾಡಿ National Building code ಮಾನದಂಡಗಳ ಅನ್ವಯ ಪ್ರಮಾಣ ಪತ್ರ ನೀಡಲು ಸೂಚಿಸಿರುವುದರಿಂದ ಪ್ರಸ್ತಾಪಿತ ಕಟ್ಟಡದ ಸ್ಟ್ರಕ್ಚರಲ್ ಪರೀಕ್ಷೆಗಳನ್ನು ನಡೆಸಿ ಈ ಕೆಳಕಂಡಂತೆ ವರದಿ ನೀಡಲಾಗಿದೆ.

ಸದರಿ ಕಟ್ಟಡದ ನಕ್ಷೆಗೆ ಅಧ್ಯಕ್ಷರು, ಆವಲಹಳ್ಳಿ ಗ್ರಾಮ ಪಂಚಾಯಿತಿ, ಬಿದರಹಳ್ಳಿ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು ರವರು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡವು ನೆಲಮಹಡಿ, ಮೊದಲನೇ ಮೇಲ್ಮಹಡಿ, ಎರಡನೇ ಮೇಲ್ಮಹಡಿ, ಮೂರನೇ ಮೇಲ್ಮಹಡಿ ಹಾಗೂ ನಾಲ್ಕನೇ ಮೇಲ್ಮಹಡಿಗಳನ್ನು ಒಳಗೊಂಡಿದ್ದು, 2016ನೇ ಸಾಲಿನಲ್ಲಿ ನಿರ್ಮಿಸಲಾಗಿರುತ್ತದೆ. ಸದರಿ ಕಟ್ಟಡಗಳಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.1 ದಕ್ಷಿಣ ಉಪವಿಭಾಗ, ಬೆಂಗಳೂರು ರವರು ವರದಿಸಿರುತ್ತಾರೆ.

ಮುಂದುವರೆದು, ಕಟ್ಟಡದ ಸುರಕ್ಷತೆಗೆ ಸಂಬಂಧಿಸಿದಂತೆ, ಶಾಲಾ ಸಂಸ್ಥೆಯವರು ಕಟ್ಟಡದ ಕಾಂಕ್ರೀಟ್ ಸದೃಢತೆಯ ಬಗ್ಗೆ ಏಪ್ರಿಲ್-2022 ರಂದು **Department of Civil Engineering UVCE, Jnanabharathi Campus, Bangalore University, Bangalore - 560056** ಮುಖಾಂತರ ಪರೀಕ್ಷೆಗಳನ್ನು ಕೈಗೊಂಡಿರುವ ಪರೀಕ್ಷಾ ವರದಿಯ ಪ್ರತಿಯನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.1 ದಕ್ಷಿಣ ಉಪವಿಭಾಗ, ಬೆಂಗಳೂರು ರವರು ಸಲ್ಲಿಸಿರುತ್ತಾರೆ. ಸದರಿ ನಡೆಸಲಾದ ಪರೀಕ್ಷೆಯ ವರದಿಯಂತೆ ಕಟ್ಟಡವು ಸದೃಢತೆಯಿಂದ ಇರುವುದು ಕಂಡು ಬಂದಿರುತ್ತದೆ.

ಉಲ್ಲೇಖ (2) ಮತ್ತು (3) ರ ಸರ್ಕಾರದ ಪತ್ರಗಳಲ್ಲಿ ಸೂಚಿಸಿರುವಂತೆ ಮೌಲ್ಯಮಾಪನ ಶುಲ್ಕವಾದ ಕಟ್ಟಡದ ಮೌಲ್ಯದ ಶೇ. 0.05% ರಷ್ಟು ಮೊತ್ತ ರೂ. 26,950/- (ರೂ. ಇಪ್ಪತ್ತಾರು ಸಾವಿರದ ಒಂಬತ್ತು ನೂರ ಐವತ್ತು ರೂಪಾಯಿಗಳು ಮಾತ್ರ) ಗಳನ್ನು ಬೆಂಗಳೂರು ಪೂರ್ವ ತಾಲ್ಲೂಕು, ಆವಲಹಳ್ಳಿ ಪಂಚಾಯಿತಿ, ಬಿದರಹಳ್ಳಿ ಹೋಬಳಿ, ಕಿತ್ತಗನೂರು ಗ್ರಾಮದಲ್ಲಿರುವ **ASSISI School** ರವರು FEDERAL Bank, ಡಿ.ಡಿ. ಸಂಖ್ಯೆ 097921 ದಿನಾಂಕ : 26.04.2022 ರಲ್ಲಿ ಪಾವತಿಸಿರುತ್ತಾರೆ.

- **ASSISI School** ಕಟ್ಟಡವನ್ನು ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಕಾಡು ಸೊಣ್ಣಪ್ಪನಹಳ್ಳಿ ಗ್ರಾಮದಲ್ಲಿ ನಿರ್ಮಿಸಲಾಗಿರುತ್ತದೆ.
- ಅಧ್ಯಕ್ಷರು, ಆವಲಹಳ್ಳಿ ಗ್ರಾಮ ಪಂಚಾಯತಿ, ಬಿದರಹಳ್ಳಿ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು ರವರಿಂದ ಅನುಮೋದಿತ ನಕ್ಷೆಗನುಗುಣವಾಗಿ ಕಟ್ಟಡವನ್ನು ನಿರ್ಮಾಣ ಮಾಡಲಾಗಿರುತ್ತದೆ.
- ಸದರಿ ಕಟ್ಟಡವನ್ನು **D Chandra sekar, Registered Enginer, Reg No. BCC/BL/3-23/E-561/88-89, Bangalore Mahanagara Palike** ರವರು ನೀಡಿರುವ ಸ್ಟ್ರಕ್ಚರಲ್ ವಿನ್ಯಾಸದಂತೆ ನಿರ್ಮಿಸಲಾಗಿರುತ್ತದೆ.
- **Design Key Engineering, Civil Engineering Consultants BCC-04-GAEC, 1066** ರವರು ನೀಡಿರುವ FORM FOR CERTIFICATE FOR SUB SURFACE INVESTIGATION (Annex-1) ಪ್ರಮಾಣ ಪತ್ರವನ್ನು ಸಂಸ್ಥೆಯವರು ಒದಗಿಸಿರುತ್ತಾರೆ.
- **Design Key Engineering, Civil Engineering Consultants BCC-04-GAEC, 1066** ರವರು ನೀಡಿರುವ CERTIFICATE FOR COMPLETED STRUCTURAL DESIGN WORK AS PER STRUCTURAL SAFETY REQUIREMENTS ಪ್ರಮಾಣ ಪತ್ರವನ್ನು ಸಂಸ್ಥೆಯವರು ಒದಗಿಸಿರುತ್ತಾರೆ. (Annex-2)
- **Denny Chirambil, SH Road behind Ananda sadan T.C. Palya Bangalore – 560036** ರವರು ನೀಡಿರುವ CERTIFICATE FOR COMPLETED STRUCTURAL WORK BY BUILDER/CONSTRUCTOR ಪ್ರಮಾಣ ಪತ್ರವನ್ನು ಸಂಸ್ಥೆಯವರು ಒದಗಿಸಿರುತ್ತಾರೆ. (Annex-3)
- **Design Key Engineering, Civil Engineering Consultants BCC-04-GAEC, 1066** ರವರು ನೀಡಿರುವ CERTIFICATE FOR SUPERVISION OF WORK ಪ್ರಮಾಣ ಪತ್ರವನ್ನು ಸಂಸ್ಥೆಯವರು ಒದಗಿಸಿರುತ್ತಾರೆ. (Annex-4)
- **Rajaram Design key Engineering, Kengeri Bangalore** ರವರು ನೀಡಿರುವ COMPLETION CERTIFICATE ಪ್ರಮಾಣ ಪತ್ರವನ್ನು ಸಂಸ್ಥೆಯವರು ಹಾಗೂ ಕಟ್ಟಡದ ಮಾಲೀಕರು ಒದಗಿಸಿರುತ್ತಾರೆ. (Annex-5)
- ಅಧ್ಯಕ್ಷರು, ಕಿತ್ತಗನೂರು ಗ್ರಾಮ ಪಂಚಾಯತಿ, ಬಿದರಹಳ್ಳಿ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು ರವರು ಕಟ್ಟಡ ಕಾಮಗಾರಿ ಪೂರ್ಣಗೊಂಡಿರುವ ಬಗ್ಗೆ ಪ್ರಮಾಣ ಪತ್ರವನ್ನು ನೀಡಿರುತ್ತಾರೆ. (Annex-6)

ಸದರಿ ಸಂಸ್ಥೆಯವರು ನೀಡಿರುವ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿ **Department of Civil Engineering UVCE, Jnanabharathi Campus, Bangalore University, Bangalore - 560056** ರವರು ಕಟ್ಟಡವು ರಚನಾತ್ಮಕವಾಗಿ ಸುರಕ್ಷಿತವಾಗಿದೆಯೆಂದು ನೀಡಿರುವ ಪರೀಕ್ಷಾ ವರದಿಯನ್ನು ಪರಿಗಣಿಸಿ ಹಾಗೂ ಕಟ್ಟಡವನ್ನು ಲೋಕೋಪಯೋಗಿ ಇಲಾಖೆಯ ತಾಂತ್ರಿಕ ತಂಡ ನೀಡಿರುವ ವರದಿಯನ್ವಯ ಬೆಂಗಳೂರು ಪೂರ್ವ ತಾಲ್ಲೂಕು, ಆವಲಹಳ್ಳಿ ಪಂಚಾಯತಿ, ಬಿದರಹಳ್ಳಿ ಹೋಬಳಿ, ಕಿತ್ತಗನೂರು ಗ್ರಾಮದಲ್ಲಿರುವ **ASSISI School** ಕಟ್ಟಡವು ಪ್ರಸಕ್ತ ಶೈಕ್ಷಣಿಕ ಸಾಲಿಗೆ **Structurally Stable** ಇದೆ ಎಂದು ನಿರಾಕ್ಷೇಪಣಾ ಪತ್ರವನ್ನು ನೀಡಲಾಗಿದೆ.

ಉಳಿದಂತೆ, ಪ್ರಸ್ತಾಪಿತ ಕಟ್ಟಡದ Non - Structural Elements (Infrastructural facilities) ಗೆ ಸಂಬಂಧಿಸಿದಂತೆ, ಸಿವಿಲ್ ಇಂಜಿನಿಯರ್, ಆರೋಗ್ಯಾಧಿಕಾರಿ, ಕಂದಾಯ ಅಧಿಕಾರಿ, ಮನಶ್ಶಾಸ್ತ್ರಜ್ಞ, ಅಗ್ನಿಶಾಮಕ ಅಧಿಕಾರಿ, ಸ್ಥಳೀಯ ಸಂಸ್ಥೆಯ ಅಧಿಕಾರಿಗಳನ್ನೊಳಗೊಂಡ ಪರೀಕ್ಷಾ ತಂಡದವತಿಯಿಂದ ಪರಿಶೀಲಿಸಿ ನಿರಾಕ್ಷೇಪಣಾ ಪತ್ರವನ್ನು ಪಡೆಯತಕ್ಕದ್ದು ಹಾಗೂ "Fire safety Certificate" ಅನ್ನು ಮುಖ್ಯ ಅಗ್ನಿಶಾಮಕ ಅಧಿಕಾರಿಯಿಂದ ಪಡೆಯತಕ್ಕದ್ದು.

ತಮ್ಮ ವಿಶ್ವಾಸಿ,

ಸಹಿ/-

ಕಾರ್ಯಪಾಲಕ ಅಭಿಯಂತರರು,
ಲೋಇ., ಬೆಂಗಳೂರು ವಿಭಾಗ,
ಬೆಂಗಳೂರು.